ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಮತ್ತು ಸವದತ್ತಿ ತಾಲ್ಲೂಕಿನ ಹಿರೇಬುದನೂರ ಗ್ರಾಮದಲ್ಲಿ ಪ್ರಾಥಮಿಕ ಪಶು ಚಿಕಿತ್ಸಾಲಯ

565 (700)ಶ್ರೀ ಕೌಜಲಗಿ ಮಹಂತೇಶ ಶಿವಾನಂದ : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ)ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವನ್ನೂರ ಗ್ರಾಮದಲ್ಲಿ ಹಾಗೂ ಸವದತ್ತಿ ತಾಲ್ಲೂಕಿನ ಹಿರೇಬುದನೂರ ಗ್ರಾಮದಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯವನ್ನು ಪ್ರಾರಂಭಿಸಲು ಸರ್ಕಾರಕ್ಕೆ ಮನವಿಗಳು ಬಂದಿವೆಯೆ ?

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಆ) ಹಾಗಿದ್ದಲ್ಲಿ ಸರ್ಕಾರದವರು ಅಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯವನ್ನು ಪ್ರಾರಂಭಿಸಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ಹಾಗೂ ಅದನ್ನು ಎಂದಿನಿಂದ ಪ್ರಾರಂಭಿಸಲಾಗುವುದು ?

ಅ) ಬಂದಿದೆ.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಹುಬ್ಬಳ್ಳಿ ಅರ್ಬನ್ ಟ್ರೆಜರಿ ಕಟ್ಟಡ

563 (1016)ಶ್ರೀ ಜಗದೀಶ್ ಶೆಟ್ಟರ್: ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹುಬ್ಬಳ್ಳಿ ಅರ್ಬನ್ ಟ್ರೆಜರಿ ಕಟ್ಟಡದ ನಿಮಿತ್ತ ನವನಗರದಲ್ಲಿ 00.22 ಗುಂಟೆ ಸ್ಥಳ ಕಾರ್ಪೋರೇಷನ್‌ನಿಂದ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಖಜಾನೆ ಕಟ್ಟಡದ ರಚನೆಗಾಗಿ ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿಯ ಅರ್ಬನ್ ಟ್ರೆಜರಿ ಸಿಬ್ಬಂದಿಯ ಸ್ಥಳಾಂತರ

564 (1017)ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ-ಗ್ರಾಮೀಣ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ)ಜಿಲ್ಲಾ ವಿಂಗಡನೆಯಾದ ನಂತರ ಹುಬ್ಬಳ್ಳಿಯಲ್ಲಿ ಅರ್ಬನ್ ಟ್ರೆಜರಿಯ ಅರ್ಧದಷ್ಟು ಸಿಬ್ಬಂದಿಯನ್ನು ಗದಗ ಮತ್ತು ಹಾವೇರಿ ಜಿಲ್ಲೆಗೆ ಸ್ಥಳಾಂತರ ಮಾಡಲಾಗಿದೆ. ಇನ್ನುಳಿದ ಅಲ್ಪ ಸಿಬ್ಬಂದಿ